'ವಿವೇಕಪ್ರಭ' ಪತ್ರಿಕೆಯ ವತಿಯಿಂದ

# ಶ್ರೀರಾಮಕೃಷ್ಣ ಭಕ್ತ ಸಮಾವೇಶ–2011

**21.10.2011 ರಿಂದ 23.10.2011 ; ಸ್ಥಳ: ನಂಜರಾಜ ಬಹದ್ದೂರ್ ಛತ್ರ, ಮೈಸೂರು**

ಶ್ರೀರಾಮಕೃಷ್ಣರು, ಶ್ರೀಮಾತೆ ಶಾರದಾದೇವಿಯವರು ಮತ್ತು ಸ್ವಾಮಿ ವಿವೇಕಾನಂದರ ಜೀವನ ಮತ್ತು ಸಂದೇಶಗಳು ಆಧುನಿಕ ಯುಗದ ಆಧ್ಯಾತ್ಮಿಕ ಜ್ಯೋತಿಗಳಾಗಿವೆ; ಈಗಿನ ಕಾಲದ ಯಾಂತ್ರಿಕ ಜೀವನಕ್ಕೆ ಜೀವಸಂಜೀವಿನಿಗಳಾಗಿವೆ. ಕಷ್ಟಕಾರ್ಪಣ್ಯಗಳಿಂದ ನೊಂದ ಮನಸ್ಸಿಗೆ ಸಾಂತ್ವನವನ್ನೂ, ಧೈರ್ಯವನ್ನೂ ಆತ್ಮವಿಶ್ವಾಸವನ್ನೂ ನೀಡುವ ಈ ಉದಾತ್ತ ಚಿಂತನೆಗಳನ್ನು ಭಕ್ತರು ಒಟ್ಟಾರೆ ಸೇರಿ ಮನನ ಮಾಡುವ ಆವಶ್ಯಕತೆ ಇದೆ. ಆ ಸುಸಂದರ್ಭ ಈಗ ಒದಗಿಬಂದಿದ್ದು, ಈ ಉದ್ದೇಶಕ್ಕಾಗಿಯೇ ವಿವೇಕಪ್ರಭ ಪತ್ರಿಕೆಯ ವತಿಯಿಂದ **'ಶ್ರೀರಾಮಕೃಷ್ಣ ಭಕ್ತ ಸಮಾವೇಶ – 2011'** ಅನ್ನು ಆಯೋಜಿಸಲಾಗಿದೆ.

ಮೂರು ದಿನಗಳ ಈ ಸಮಾವೇಶದಲ್ಲಿ **ದಿವ್ಯತ್ರಯರ ಜೀವನ–ಸಂದೇಶಗಳ ಆಲೋಚನೆ, ಶಾಸ್ತ್ರಗಳ ಬಗ್ಗೆ ತಿಳಿವಳಿಕೆ, ಧ್ಯಾನದ ಆಚರಣೆಯ ಬಗ್ಗೆ ಅರಿವು, ದೈನಂದಿನ ಜೀವನದಲ್ಲಿ ಅಧ್ಯಾತ್ಮವನ್ನು ಅಳವಡಿಸಿಕೊಳ್ಳುವುದು ಹೇಗೆ?** – ಈ ವಿಷಯಗಳ ಬಗ್ಗೆ ರಾಮಕೃಷ್ಣ ಮಹಾಸಂಘದ ಹಿರಿಯ ಯತಿಗಳು ಮಾರ್ಗದರ್ಶನ ಮಾಡುವರು. ಹಾಗೆಯೇ ನಾಡಿನ ಸುಪ್ರಸಿದ್ಧ ಭಾಷಣಕಾರರಾದ ಶ್ರೀ ಗುರುರಾಜ ಕರ್ಜಗಿ ಮತ್ತು ಸೂಲಿಬೆಲೆ ಚಕ್ರವರ್ತಿ ಅವರಿಂದ ಪ್ರವಚನಗಳು ಮತ್ತು ಪ್ರಸಿದ್ಧ ಪಿಟೀಲು ವಾದಕರಾದ ವಿದ್ವಾನ್ ಎಂ. ಮಂಜುನಾಥ ಮತ್ತು ಎಂ.ನಾಗರಾಜ್ ಅವರಿಂದ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ, ಭಾಗವತ ಪುರಾಣವನ್ನು ಆಧರಿಸಿದ ಉದ್ಬೋಧಕ ನಾಟಕ – ಇವೂ ಆಯೋಜಿತವಾಗಿವೆ. ಅದಲ್ಲದೆ ಪ್ರಸಿದ್ಧ ಗಾಯಕರಿಂದ ದೈನಂದಿನ ಭಜನೆಯ ಜೊತೆಗೆ, ಭಾಷಣಗಳ ಮಧ್ಯೆ 'ನಾಮಸಂಕೀರ್ತನೆ' ಕಾರ್ಯಕ್ರಮವೂ ಇರುತ್ತದೆ. ಈ ಸಮಾವೇಶದಲ್ಲಿ ರಾಮಕೃಷ್ಣ ಮಹಾಸಂಘವು ಕರ್ನಾಟಕದಲ್ಲಿ ಹೊರತರುತ್ತಿರುವ ಏಕೈಕ ಪತ್ರಿಕೆಯಾದ 'ವಿವೇಕಪ್ರಭ'ದ ಪ್ರಚಾರದ ಬಗ್ಗೆಯೂ ಸಮಾಲೋಚನೆ ನಡೆಯುವುದು.

ನಂಜರಾಜ ಬಹದ್ದೂರ್ ಛತ್ರವು ಊರಿನ ಮಧ್ಯಭಾಗದಲ್ಲಿದ್ದು, ಅಲ್ಲಿಯೇ ಸಮಾರಂಭದ ಮತ್ತು ಊಟ ವಸತಿಗಳ ಏರ್ಪಾಡು ಇರುತ್ತದೆ. ವಿಶಾಲವಾದ ಸ್ಥಳ, ಉತ್ತಮ ವಸತಿ ವ್ಯವಸ್ಥೆಯನ್ನು ಈ ಛತ್ರ ಹೊಂದಿದೆ. 800–1000 ಜನರಿಗೆ ಇಲ್ಲಿ ಊಟವಸತಿಗಳ ಸೌಕರ್ಯ ಮಾಡಬಹುದಾಗಿದೆ.

1. **ಕಾಣಿಕೆ : (ವಸತಿ ಸಹಿತ) – ರೂ.500/– ಮಾತ್ರ ; (ವಸತಿ ರಹಿತ) – ರೂ.350/– ಮಾತ್ರ**
2. **ಶಿಬಿರಾರ್ಥಿಗಳು 21.10.2011 (ಶುಕ್ರವಾರ) ಮಧ್ಯಾಹ್ನ ಒಂದು ಗಂಟೆಯ ಒಳಗೆ ಛತ್ರಕ್ಕೆ ಬರಬೇಕು ಮತ್ತು 23.10.2011 ರಂದು (ಭಾನುವಾರ) ಮಧ್ಯಾಹ್ನ 3.30 ರ ನಂತರ ತೆರಳಬಹುದು. ವಸತಿ ರಹಿತ ಅಭ್ಯರ್ಥಿಗಳು ಪ್ರತಿನಿತ್ಯ ಕಾರ್ಯಕ್ರಮಕ್ಕೆ ಬಂದು ತದನಂತರ ಮನೆಗೆ ತೆರಳಬಹುದು.**
3. **ಆಸಕ್ತರು, ಭಾಗವಹಿಸುವ ಪ್ರತಿ ವ್ಯಕ್ತಿಗೆ (ವಸತಿ ಸಹಿತ) – ರೂ.500/– ಮಾತ್ರ ; (ವಸತಿ ರಹಿತ) – ರೂ.350/– ಮಾತ್ರ ಡಿ.ಡಿ. ಕಳುಹಿಸಿ ನೋಂದಾಯಿಸಿಕೊಳ್ಳಬಹುದು. ಅವರಿಗೆ 10 ರಸೀದಿಗಳು ಇರುವ ಒಂದು ರಸೀದಿಪುಸ್ತಕವನ್ನು ಕಳಿಸಲಾಗುವುದು. ಅವರು ಆಗಸ್ಟ್ 30 ರ ಒಳಗೆ ವಿವೇಕಪ್ರಭ ಚಂದಾ ಮಾಡಿಸಲು ಪ್ರಯತ್ನಿಸಬೇಕು. ಆಗಸ್ಟ್ 30 ರ ನಂತರ ಚಂದಾಹಣವನ್ನು ಕಳುಹಿಸಿದರೆ, ತಮಗೆ ಸೂಚನಾಪತ್ರವನ್ನು ಅಂಚೆಯ ಮೂಲಕ ಕಳಿಸಲಾಗುವುದು. ಅದು ಸಾಧ್ಯವಾಗದಿದ್ದರೂ, ಆದ್ಯತೆಯ ಪ್ರಕಾರ ನಿಮಗೆ ಶಿಬಿರಕ್ಕೆ ಬರಬೇಕಾದ ಸೂಚನೆಯನ್ನು ತಲುಪಿಸಲಾಗುವುದು. 'ವಿವೇಕಪ್ರಭ' ಚಂದಾ ಮಾಡಿಸುವುದನ್ನು ಈ ಸಮಾವೇಶಕ್ಕೆ ಆದ್ಯತೆಯೆಂದು ಪರಿಗಣಿಸಲಾಗುವುದೇ ಹೊರತು ಇದು ನಿರ್ಬಂಧವಲ್ಲ.**
4. **ಒಟ್ಟು ಕೇವಲ 800 ಶಿಬಿರಾರ್ಥಿಗಳಿಗೆ ಮಾತ್ರ ಅವಕಾಶವಿರುವುದರಿಂದ ಒಡನೇ ಹಣ ಕಳುಹಿಸಿ, ನೋಂದಾಯಿಸಿಕೊಳ್ಳಿ.**
5. **ಹಣವನ್ನು ಕೇವಲ ಡಿ.ಡಿ. ಮೂಲಕ 'Sri Ramakrishna Ashrama, Viveka Prabha A/c' ಹೆಸರಿಗೆ ಕಳಿಸಬೇಕು. ಲಕೋಟೆಯ ಮೇಲೆ 'ವಿವೇಕಪ್ರಭ ಭಕ್ತ ಸಮಾವೇಶ – 2011' ಎಂದು ನಮೂದಿಸಿರಬೇಕು. ಪತ್ರದಲ್ಲಿ ಹೆಸರು, ವಿಳಾಸ, ಮೊಬೈಲ್ ನಂಬರ್, ಇ–ಮೈಲ್ ವಿಳಾಸ, ವಯಸ್ಸುಗಳನ್ನು ನಮೂದಿಸಬೇಕು. ಒಂದೇ ಪತ್ರದಲ್ಲಿ ಎಷ್ಟು ಜನರನ್ನು ಬೇಕಾದರೂ ನಮೂದಿಸಬಹುದು ಹಾಗೂ ಒಟ್ಟು ಹಣವನ್ನು ಒಂದೇ ಡಿ.ಡಿ.ಯ ಮೂಲಕ ಕಳಿಸಬಹುದು.**
6. **ಹೊಟೆಲ್ ಕೊಠಡಿ ವ್ಯವಸ್ಥೆ ಇಚ್ಛಿಸುವವರು ಬರೆದು ತಿಳಿಸಿದರೆ, ಅವರಿಗೆ ಮಾಹಿತಿ ಪತ್ರ ಕಳಿಸಲಾಗುವುದು.**
7. **ದೀರ್ಘಕಾಲದ ಕಾಯಿಲೆಗಳಿಂದ ನರಳುತ್ತಿರುವವರು ಭಾಗವಹಿಸದಿರುವುದು ಒಳ್ಳೆಯದು.**
8. **ಡಿ.ಡಿ. ಮತ್ತು ಪತ್ರವನ್ನು ಕಳಿಸಬೇಕಾದ ವಿಳಾಸ : 'ವಿವೇಕಪ್ರಭ ಭಕ್ತ ಸಮಾವೇಶ – 2011', ಶ್ರೀರಾಮಕೃಷ್ಣ ಆಶ್ರಮ, ಯಾದವಗಿರಿ, ಮೈಸೂರು – 570 020**